ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 21/5/20


# ಸರ್ಕಾರದ ಮೇಲೆ ಮುಗಿಬಿದ್ದ ಕೈ

## ಹೋರಾಟಕ್ಕೆ ಚಾಲನೆ | ಜಿಲ್ಲಾ, ತಾಲ್ಲೂಕು ಮಟ್ಟಕ್ಕೂ ವಿಸ್ತರಿಸಲು ನಿರ್ಧಾರ

■ ವಿಜಯವಾಣಿ ಸುದ್ದಿಲೋಕ ಬೆಂಗಳೂರು

ಎಪಿಎಂಸಿ ಕಾಯ್ದೆಗೆ ತಿದ್ದುಪಡಿ, ರೈತರು ಹಾಗೂ ಕಾರ್ಮಿಕ ವಿರೋಧಿ ನೀತಿ ಹಾಗೂ ಗ್ರಾ.ಪಂ.ಗಳಿಗೆ ಆಡಳಿತ ಸಮಿತಿ ರಚನೆ ನಿರ್ಧಾರವನ್ನು ವಿರೋಧಿಸಿ ಸರ್ಕಾರದ ಮೇಲೆ ಪ್ರತಿಪಕ್ಷ ಕಾಂಗ್ರೆಸ್ ಮುಗಿಬಿದ್ದಿದ್ದು, ಬುಧವಾರ ವಿಧಾನಸೌಧದ ಮಹಾತ್ಮಾ ಗಾಂಧಿ ಪ್ರತಿಮೆ ಬಳಿ ಸಾಂಕೇತಿಕ ಪ್ರತಿಭಟನೆ ಮೂಲಕ ಹೋರಾಟಕ್ಕೆ ಚಾಲನೆ ನೀಡಿದೆ.

» **ಕೇಂದ್ರ, ರಾಜ್ಯ ಸರ್ಕಾರಗಳ ವಿರುದ್ಧ ಸಿದ್ದರಾಮಯ್ಯ ಗುಡುಗು**

ಪ್ರತಿಪಕ್ಷಗಳ ಸಲಹೆ, ಸೂಚನೆಗಳನ್ನು ಪರಿಗಣಿಸುತ್ತಿಲ್ಲ. ಮಂಡಿಸಿದ ಬೇಡಿಕೆಗಳಿಗೆ ಸ್ಪಂದಿಸದೆ ಸರ್ಕಾರ ಏಕಪಕ್ಷೀಯ ಧೋರಣೆ ಅನುಸರಿಸುತ್ತಿದೆ ಎಂದು ಕೈ ನಾಯಕರು ಆರೋಪಿಸಿದ್ದು, 2 ತಿಂಗಳಿಂದ ನೀಡುತ್ತ ಬಂದಿದ್ದ ಸಹಕಾರವನ್ನು ಹಿಂದಕ್ಕೆ ಪಡೆದು ಚಳವಳಿಗೆ ಧುಮುಕಿದ್ದಾರೆ. ಎಲ್ಲ ವಿಚಾರಗಳನ್ನು ಜನರ ಮುಂದಿಡುವುದಕ್ಕಾಗಿ ಜಿಲ್ಲಾ, ತಾಲೂಕು ಮಟ್ಟಕ್ಕೂ ಹೋರಾಟ ಕೊಂಡೊಯ್ಯಲು ಸಜ್ಜಾಗಿದ್ದಾರೆ.

**ಸಿದ್ದರಾಮಯ್ಯ ಗುಡುಗು:** ಕರೊನಾ ನಿಯಂತ್ರಣ, ಜನರ ಕಷ್ಟಕ್ಕೆ ಸ್ಪಂದಿಸುವಲ್ಲಿ ಸರ್ಕಾರಗಳು ವಿಫಲವಾಗಿವೆ. ಸಂಕಷ್ಟ ಕಾಲದಲ್ಲಿ ನಾವು ನೀಡಿದ ಸಹಕಾರ ನಿಷ್ಫಲವಾಗಿದ್ದು, ಅನ್ಯಾಯ ಸಹಿಸಲಾಗದು. ಇನ್ನುಮುಂದೆ ಹೋರಾಟದ ಸ್ವರೂಪ ಮತ್ತಷ್ಟು ತೀವ್ರಗೊಳ್ಳಲಿದೆ ಎಂದು ಸಿದ್ದರಾಮಯ್ಯ ಗುಡುಗಿದರು.

ಜನರಿಗೆ ನೆರವು ನೀಡುವಲ್ಲಿ ಬಿಜೆಪಿ ಸರ್ಕಾರ ವಿಫಲವಾಗಿದೆ. ಪ್ರತಿಪಕ್ಷಗಳ ಸಲಹೆಗಳಿಗೆ ಓಗೊಡದೆ ಜನ ವಿರೋಧಿ ನಿರ್ಧಾರಗಳನ್ನು ತೆಗೆದುಕೊಂಡಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ದೂರಿದರು.

ಹಿರಿಯ ನಾಯಕರಾದ ಬಿ.ಕೆ. ಹರಿಪ್ರಸಾದ್, ಸಲೀಂ ಅಹ್ಮದ್ ಮತ್ತಿತರರು ಪಾಲ್ಗೊಂಡಿದ್ದರು.

ವಿಜಯವಾಣಿ ಚಿತ್ರ



ಬುಧವಾರ ವಿಧಾನಸೌಧ ಬಳಿ ಕಾಂಗ್ರೆಸ್ ನಾಯಕರು ಪ್ರತಿಭಟನೆ ನಡೆಸಿದರು.

### ದಾವೆ ಹೂಡಲಿ, ಬಂಧಿಸಲಿ

**ಭದ್ರತೆ ಕಾರಣಕ್ಕೆ ಪ್ರತಿಭಟನೆಗೆ ಅನುಮತಿ ನೀಡಿಲ್ಲವೆಂದು ವಿಧಾನಸೌಧ ಪೊಲೀಸರು ಅಂಟಿಸಿದ್ದ ಸೂಚನಾಪತ್ರ ಕಂಡ ಸಿದ್ದರಾಮಯ್ಯ, ಕೆಂಡಾಮಂಡಲರಾದರು. ವಿಧಾನಸೌಧದಲ್ಲಿ ನಿನ್ನೆ ಶಾಸಕಾಂಗ ಪಕ್ಷದ ಸಭೆ ನಡೆಸಲು ಬಿಡಲಿಲ್ಲ, ಈಗ ಪ್ರತಿಭಟನೆಗೆ ಅವಕಾಶ ಕೊಡದಿದ್ದರೆ ಹೇಗೆ ಎಂದು ಪೊಲೀಸರ ವಿರುದ್ಧ ರೇಗಿದರು. ನಿಷೇಧಾಜ್ಞೆ ಉಲ್ಲಂಘಿಸಿದ್ದಕ್ಕಾಗಿ ದಾವೆ ಹೂಡಲಿ, ಬಂಧಿಸಲಿ ಎಂದು ಸಿದ್ದರಾಮಯ್ಯ ಸವಾಲೆಸೆದರು.**